ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಹೆಗ್ಗಡದೇವನ ಕೋಟೆ ತಾಲ್ಲೂಕು ಆಸ್ಪತ್ರೆ ಶಿಥಿಲಾವಸ್ಥೆ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1003 (1047) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೆಗ್ಗಡದೇವನ ಕೋಟೆಯ ತಾಲ್ಲೂಕು ಆಸ್ಪತ್ರೆಯನ್ನು ನೂರು ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆಯೇ; ಪ್ರಸ್ತುತ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಇರುವ ಕಟ್ಟಡದ ವಿಸ್ತರಣೆಗೆ ಯೋಜನೆ ರೂಪಿಸಲಾಗಿದೆಯೇ;

(ಆ) ಹಾಲಿ ಇರುವ ಕಟ್ಟಡವು ವಿಸ್ತರಣೆಗೆ ಸೂಕ್ತವಲ್ಲವೆಂದು ಅಡಿಪಾಯ ಭದ್ರವಾಗಿಲ್ಲವೆಂದು ಮಳೆಗಾಲದಲ್ಲಿ ಸೋರುತ್ತಿದ್ದು ಶಿಥಿಲವಾಗಿದೆ ಎಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಿರ್ಮಾಣಕ್ಕಾಗಿ 30 ವರ್ಷವಾಗಿರುವ ಈ ಕಟ್ಟಡವನ್ನು ನೆಲಸಮಗೊಳಿಸಿ ಆಧುನಿಕ ಮಾದರಿಯಲ್ಲಿ ನೂತನ ಕಟ್ಟಡ ನಿರ್ಮಿಸಲು ಕ್ರಮ ಜರುಗಿಸಲಾಗುವುದೆ; ಈಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಪಕ್ಕದಲ್ಲಿರುವ ಜಾಗದಲ್ಲಿ ಕಟ್ಟಡ ನಿರ್ಮಾಣಕ್ಕೆ ಕ್ರಮ ಜರುಗಿಸಲಾಗುವುದೇ ?